**Akashvani : Bangalore**
**National Bulletin In Kannada**
**25.04.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

**೧. ಪಾಕಿಸ್ತಾನದ ಪ್ರಜೆಗಳನ್ನು ಗುರುತಿಸಿ, ಸ್ವದೇಶಕ್ಕೆ ಮರಳುವುದನ್ನು ಖಚಿತಪಡಿಸಿಕೊಳ್ಳುವಂತೆ ಎಲ್ಲಾ ಮುಖ್ಯಮಂತಿಗಳಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ನಿರ್ದೇಶನ**

**೨. ವಕ್ಫ್ ತಿದ್ದುಪಡಿ ವಿಧೇಯಕ; ಸುಪ್ರೀಂಕೋರ್ಟ್‌ಗೆ ಅಫಿಡವಿಟ್ ಸಲ್ಲಿಸಿದ ಕೇಂದ್ರ ಸರ್ಕಾರ**

**೩. ಸ್ವಾತಂತ್ರ್ಯ ಹೋರಾಟಗಾರ ಸಾವರ್ಕರ್ ಕುರಿತು ಅವಹೇಳನಕಾರಿ ಹೇಳಿಕೆ; ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಗೆ ಸುಪ್ರೀಂಕೋರ್ಟ್ ವಾಗ್ದಂಡನೆ**

**೪. ಇಸ್ರೋ ಮಾಜಿ ಅಧ್ಯಕ್ಷ ಡಾ.ಕೆ.ಕಸ್ತೂರಿ ರಂಗನ್ ನಿಧನಕ್ಕೆ ಗಣ್ಯರ ಸಂತಾಪ**

**೫. ಐಪಿಎಲ್ ಟಿ-೨೦ ಕ್ರಿಕೆಟ್; ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಟಾಸ್ ಗೆದ್ದ ಸನ್ ರೈಸರ್ಸ್ ಹೈದರಾಬಾದ್ ಫೀಲ್ಡಿಂಗ್ ಆಯ್ಕೆ**

**<><*<><>*><>**

ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಪಾಕಿಸ್ತಾನದ ಪ್ರಜೆಗಳಿಗೆ ನೀಡಲಾದ ವೀಸಾಗಳನ್ನು ಭಾರತ ಈಗಾಗಲೇ ರದ್ದುಗೊಳಿಸಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಮಾತನಾಡಿ, ರಾಜ್ಯಗಳಲ್ಲಿರುವ ಎಲ್ಲಾ ಪಾಕಿಸ್ತಾನಿ ಪ್ರಜೆಗಳನ್ನು ಗುರುತಿಸುವಂತೆ ಹಾಗೂ ಅವರು ಪಾಕಿಸ್ತಾನಕ್ಕೆ ಶೀಘ್ರ ಮರಳುವುದನ್ನು ಖಚಿತಪಡಿಸಿಕೊಳ್ಳಲು ಕ್ರಮಗಳನ್ನು ತೆಗೆದುಕೊಳ್ಳುವಂತೆ ಹೇಳಿದರು. ನವದೆಹಲಿಯಲ್ಲಿಂದು ಸಿಂಧೂ ಜಲ ಒಪ್ಪಂದಕ್ಕೆ ಸಂಬಂಧಿಸಿದಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ನೇತೃತ್ವದಲ್ಲಿ ಸಭೆ ಪ್ರಗತಿಯಲ್ಲಿದೆ. ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ಮತ್ತು ಹಿರಿಯ ಸರ್ಕಾರಿ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದಾರೆ. ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ಸಿಂಧೂ ಜಲ ಒಪ್ಪಂದವನ್ನು ಭಾರತ ರದ್ದುಗೊಳಿಸಿದೆ.

**<><*<><>*><>**

ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಮತ್ತು ನೆದರ್‌ಲ್ಯಾಂಡ್ಸ್ ಪ್ರಧಾನಿ ಡಿಕ್ ಸ್ಕೂಫ್ ಅವರು ಇಂದು ಪ್ರಧಾನಿ ನರೇಂದ್ರ ಮೋದಿ ಅವರಿಗೆ ದೂರವಾಣಿ ಕರೆ ಮಾಡಿ, ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ತೀವ್ರವಾಗಿ ಖಂಡಿಸಿದರು. ಭಾರತದ ನೆಲದಲ್ಲಿ ನಡೆದ ಘೋರ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟ ಅಮಾಯಕ ಜೀವಗಳಿಗೆ ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಸಂತಾಪ ಸೂಚಿಸಿದರು. ಭಯೋತ್ಪಾದಕ ದಾಳಿಯನ್ನು ಬಲವಾಗಿ ಖಂಡಿಸಿದ ಅವರು, ಈ ದುರಂತದ ಸಮಯದಲ್ಲಿ ಭಾರತದ ಜನರೊಂದಿಗೆ ಬ್ರಿಟನ್ ನಿಂತಿದೆ ಎಂದು ಹೇಳಿದರು. ನೆದರ್‌ಲ್ಯಾಂಡ್ಸ್ ಪ್ರಧಾನಿ ಡಿಕ್ ಸ್ಕೂಫ್ ಮಾತನಾಡಿ, ಪಹಲ್ಗಾಮ್‌ನಲ್ಲಿ ನಡೆದ ಅಮಾನವೀಯ ಭಯೋತ್ಪಾದಕ ದಾಳಿಗೆ ಸಂತಾಪ ಸೂಚಿಸಿದರು ಮತ್ತು ಹೇಡಿತನದ ಈ ಕೃತ್ಯವನ್ನು ಖಂಡಿಸಿದರು. ನೆದರ್‌ಲ್ಯಾಂಡ್ಸ್ ಪ್ರಧಾನಿಯವರ ಬೆಂಬಲದ ಮತ್ತು ಒಗ್ಗಟ್ಟಿನ ಮಾತುಗಳಿಗೆ ಪ್ರಧಾನಿ ಮೋದಿ ಧನ್ಯವಾದ ಸಲ್ಲಿಸಿದರು. ಭಯೋತ್ಪಾದನೆಯ ವಿರುದ್ಧ ಜಾಗತಿಕ ಹೋರಾಟವನ್ನು ಬಲಪಡಿಸಲು ನೆದರ್‌ಲ್ಯಾಂಡ್ಸ್‌ನೊಂದಿಗೆ ನಿಕಟವಾಗಿ ಕೆಲಸ ಮಾಡಲು ಭಾರತ ಎದುರು ನೋಡುತ್ತಿದೆ ಎಂದು ಇದೇ ವೇಳೆ ಅವರು ತಿಳಿಸಿದರು.

**<><*<><>*><>**

ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ, ಪಾಕಿಸ್ತಾನದ ವಿರುದ್ಧ ಕೇಂದ್ರ ಸರ್ಕಾರ ಘೋಷಿಸಿದ ಕ್ರಮಗಳಿಗೆ ಕಾಂಗ್ರೆಸ್ ಪಕ್ಷದ ಬೆಂಬಲವನ್ನು ವಿರೋಧ ಪಕ್ಷದ ನಾಯಕ ಮತ್ತು ಕಾಂಗ್ರೆಸ್ ಹಿರಿಯ ನಾಯಕ ರಾಹುಲ್ ಗಾಂಧಿ ಇಂದು ಪುನರುಚ್ಚರಿಸಿದರು. ಇದಕ್ಕೂ ಮುನ್ನ ರಾಹುಲ್ ಗಾಂಧಿ, ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಮತ್ತು ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರನ್ನು ಭೇಟಿಯಾಗಿ, ಭಯೋತ್ಪಾದಕ ಮೂಲಸೌಕರ್ಯ ನಾಶಮಾಡುವಲ್ಲಿ ಸರ್ಕಾರಕ್ಕೆ ಸಾಧ್ಯವಿರುವ ಎಲ್ಲ ಬೆಂಬಲವನ್ನು ನೀಡುವುದಾಗಿ ಅವರು ಭರವಸೆ ನೀಡಿದರು. ಇದೇ ವೇಳೆ ಪಹಲ್ಗಾಮ್ ದಾಳಿಯಲ್ಲಿ ಗಾಯಗೊಂಡ ವ್ಯಕ್ತಿಗಳನ್ನು ರಾಹುಲ್ ಗಾಂಧಿ ಭೇಟಿಯಾಗಿ, ಅವರ ಆರೋಗ್ಯವನ್ನು ವಿಚಾರಿಸಿದರು.

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ವ್ಯಾಟಿಕನ್ ನಗರದಲ್ಲಿ ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ಇಟಲಿಯ ರೋಮ್‌ಗೆ ತಲುಪಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಎರಡು ದಿನಗಳ ಕಾಲ ವ್ಯಾಟಿಕನ್ ನಗರಕ್ಕೆ ಭೇಟಿ ನೀಡಿದ್ದಾರೆ. ಅವರೊಂದಿಗೆ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಕೇಂದ್ರ ಅಲ್ಪಸಂಖ್ಯಾತ

ವ್ಯವಹಾರಗಳ ರಾಜ್ಯ ಸಚಿವ ಜಾರ್ಜ್ ಕುರಿಯನ್ ಮತ್ತು ಗೋವಾ ವಿಧಾನಸಭೆಯ ಉಪಾಧ್ಯಕ್ಷ ಜೋಶುವಾ ಡಿಸೋಜಾ ಇದ್ದಾರೆ.

**<><*<><>*><>**

ದೇಶಾದ್ಯಂತ ನಾಳೆ ನಡೆಯಲಿರುವ ಉದ್ಯೋಗ ಮೇಳದಲ್ಲಿ ಸುಮಾರು ೫೧ ಸಾವಿರ ಉದ್ಯೋಗ ನಿಯುಕ್ತಿ ಪತ್ರ ವಿತರಣ ಮಾಡಲಾಗುವುದು. ಪ್ರಧಾನಿ ನರೇಂದ್ರ ಮೋದಿಯವರು ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ.ಹುಬ್ಬಳ್ಳಿಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಕೇಂದ್ರದ ಯುವ ವ್ಯವಹಾರ ಮತ್ತು ಕ್ರೀಡಾ ರಾಜ್ಯ ಸಚಿವೆ ರಕ್ಷಾ ನಿಖಿಲ್ ಖಡ್ಸೆ ಸುಮಾರು ೫೦ ಉದ್ಯೋಗ ನಿಯುಕ್ತಿ ಪತ್ರ ವಿತರಿಸಲಿದ್ದಾರೆ. ಬೆಂಗಳೂರಿನ ಕ್ವೀನ್ಸ್ ರಸ್ತೆಯಲ್ಲಿರುವ ಕಾವೇರಿ ಸಭಾಂಗಣದಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕೆ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಚಾಲನೆ ನೀಡಲಿದ್ದಾರೆ.

**<><*<><>*><>**

ವಕ್ಫ್ ಕಾನೂನು ದುರುಪಯೋಗವನ್ನು ತಡೆಗಟ್ಟಲು ೧೯೯೫ ರ ವಕ್ಫ್ ಕಾಯ್ದೆಗೆ ತಿದ್ದುಪಡಿಗಳನ್ನು ತರಲಾಗಿದೆ ಎಂದು ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿದ ಅಫಿಡವಿಟ್‌ನಲ್ಲಿ ಕೇಂದ್ರ ಸರ್ಕಾರ ಹೇಳಿದೆ. ಇದು ದೇಶದಲ್ಲಿ ಸರ್ಕಾರಿ ಆಸ್ತಿಗಳ ಅತಿಕ್ರಮಣ ತಡೆಗಟ್ಟುವ ಜತೆಗೆ ವಕ್ಫ್ ಮಂಡಳಿಗಳನ್ನು ಸರಿಯಾಗಿ ನಿರ್ವಹಿಸಲಾಗಿದೆ ಮತ್ತು ಪಾರದರ್ಶಕತೆಯಿಂದ ಕಾರ್ಯನಿರ್ವಹಿಸುತ್ತಿದೆ ಎಂಬುದನ್ನು ಖಚಿತಪಡಿಸಿಕೊಳ್ಳಲಿದೆ ಎಂದು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವಾಲಯ ಸಲ್ಲಿಸಿರುವ ಪ್ರಾಥಮಿಕ ಅಫಿಡವಿಟ್‌ನಲ್ಲಿ ತಿಳಿಸಲಾಗಿದೆ. ೨೦೧೩ ರಲ್ಲಿ ತಂದ ತಿದ್ದುಪಡಿಯ ನಂತರ, ವಕ್ಫ್ ಆಸ್ತಿಗಳಲ್ಲಿ ಶೇಕಡಾ ೧೧೬ ರಷ್ಟು ಏರಿಕೆಯಾಗಿದೆ. ಹೆಚ್ಚಿನ ವಕ್ಫ್ ಮಂಡಳಿಗಳು ಅತ್ಯಂತ ಪಾರದರ್ಶಕವಲ್ಲದ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ ಮತ್ತು ಸಾರ್ವಜನಿಕ ವಲಯದಲ್ಲಿ ವಿವರಗಳನ್ನು ಅಪ್‌ಲೋಡ್ ಮಾಡಿಲ್ಲ ಅಥವಾ ಭಾಗಶಃ ವಿವರಗಳನ್ನು ಅಪ್‌ಲೋಡ್ ಮಾಡಲಾಗಿದೆ ಎಂದು ಕೇಂದ್ರ ಸರ್ಕಾರ, ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿದ ತನ್ನ ಅಫಿಡವಿಟ್‌ನಲ್ಲಿ ತಿಳಿಸಿದೆ. ದೇಶದಲ್ಲಿ ವಕ್ಫ್ ಆಸ್ತಿಗಳ ನಿರ್ವಹಣೆಯನ್ನು ಪಾರದರ್ಶಕ, ಪರಿಣಾಮಕಾರಿ ಮತ್ತು ಎಲ್ಲರನ್ನೂ ಒಳಗೊಳ್ಳುವ ಕ್ರಮಗಳ ಮೂಲಕ ಆಧುನೀಕರಿಸುವ ಉದ್ದೇಶದಿಂದ ವಕ್ಫ್ ತಿದ್ದುಪಡಿ ಕಾಯ್ದೆ, ೨೦೨೫ ಅನ್ನು ಅಂಗೀಕರಿಸಲಾಗಿದೆ ಎಂದು ಅದು ಹೇಳಿದೆ. ಮುಂದಿನ ವಿಚಾರಣೆಯನ್ನು ಮೇ ೫ ಕ್ಕೆ ಮುಂದೂಡಿದ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ

ನೇತೃತ್ವದ ನ್ಯಾಯಪೀಠ, ಮುಂದಿನ ವಿಚಾರಣೆಯನ್ನು ಪ್ರಾಥಮಿಕ ವಿಚಾರಣೆಯಾಗಿ ನಡೆಸಲಾಗುವುದು ಮತ್ತು ಅಗತ್ಯವಿದ್ದರೆ ಮಧ್ಯಂತರ ಆದೇಶಗಳನ್ನು ಹೊರಡಿಸಲಾಗುವುದು ಎಂದು ಸ್ಪಷ್ಟಪಡಿಸಿದೆ.

**<><*<><>*><>**

ಸ್ವಾತಂತ್ರ್ಯ ಹೋರಾಟಗಾರ ವಿನಾಯಕ ದಾಮೋದರ್ ಸಾವರ್ಕರ್ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದಕ್ಕಾಗಿ ಸುಪ್ರೀಂ ಕೋರ್ಟ್ ಇಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ವಾಗ್ದಂಡನೆ ವಿಧಿಸಿದೆ. ನ್ಯಾಯಮೂರ್ತಿಗಳಾದ ದೀಪಂಕರ್ ದತ್ತ ಮತ್ತು ಮನಮೋಹನ್ ಅವರನ್ನೊಳಗೊಂಡ ನ್ಯಾಯಪೀಠವು, ಬೇಜವಾಬ್ದಾರಿ ಹೇಳಿಕೆಗಳನ್ನು ನೀಡದಂತೆ ರಾಹುಲ್ ಗಾಂಧಿ ಅವರಿಗೆ ನಿರ್ದೇಶಿಸಿದೆ. ಅಲ್ಲದೇ ಭವಿಷ್ಯದಲ್ಲಿ ಅಂತಹ ಯಾವುದೇ ಹೇಳಿಕೆಗಳನ್ನು ನೀಡಿದರೆ, ಸ್ವಯಂಪ್ರೇರಿತ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದೆ. ೨೦೨೨ ರ ನವೆಂಬರ್‌ನಲ್ಲಿ, ರಾಹುಲ್ ಗಾಂಧಿಯವರು ತಮ್ಮ ಭಾರತ್ ಜೋಡೋ ಯಾತ್ರೆಯ ಸಮಯದಲ್ಲಿ, ಮಹಾರಾಷ್ಟ್ರದ ಅಕೋಲಾದಲ್ಲಿ ನಡೆದ ರ್‍ಯಾಲಿಯಲ್ಲಿ ವೀರ ಸಾವರ್ಕರ್ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆಗಳನ್ನು ನೀಡಿದ್ದರು.

**<><*<><>*><>**

ಭಾರತೀಯ ಬಾಹ್ಯಾಕಾಶ ವಿಜ್ಞಾನಿ, ಇಸ್ರೋ ಮುಖ್ಯಸ್ಥರಾಗಿದ್ದ ಡಾ. ಕೆ. ಕಸ್ತೂರಿ ರಂಗನ್ ಅವರು ಇಂದು ಬೆಳಗ್ಗೆ ತಮ್ಮ ಸ್ವಗೃಹದಲ್ಲಿ ನಿಧನರಾಗಿದ್ದಾರೆ. ಅವರಿಗೆ ೮೪ ವರ್ಷ ವಯಸ್ಸಾಗಿತ್ತು. ಪದ್ಮಶ್ರೀ, ಪದ್ಮಭೂಷಣ, ಪದ್ಮವಿಭೂಷಣ ಪ್ರಶಸ್ತಿ ಪುರಸ್ಕೃತರಾಗಿದ್ದ ಅವರು, ರಾಷ್ಟ್ರೀಯ ಶಿಕ್ಷಣ ನೀತಿಯ ಹಿಂದಿನ ಪ್ರಮುಖ ಶಕ್ತಿಯಾಗಿದ್ದರು. ಕಸ್ತೂರಿ ರಂಗನ್ ಅವರು ನವದೆಹಲಿಯ ಜವಹರಲಾಲ್ ನೆಹರು ವಿಶ್ವವಿದ್ಯಾಲಯ, ರಾಜಸ್ತಾನದ ಕೇಂದ್ರೀಯ ವಿಶ್ವವಿದ್ಯಾಲಯ ಹಾಗೂ ಎನ್‌ಐಐಟಿ ವಿಶ್ವವಿದ್ಯಾನಿಲಯಗಳ ಕುಲಪತಿಗಳಾಗಿದ್ದರು. ಅವರು ಕರ್ನಾಟಕ ಜ್ಞಾನ ಆಯೋಗದ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದರು. ರಾಜ್ಯಸಭಾ ಸದಸ್ಯರೂ ಆಗಿದ್ದ ಅವರು, ಭಾರತೀಯ ಯೋಜನಾ ಆಯೋಗದ ಸದಸ್ಯರಾಗಿದ್ದರು. ಪಶ್ಚಿಮಘಟ್ಟದ ಸಂರಕ್ಷಣೆ ಕುರಿತ ಕಸ್ತೂರಿ ರಂಗನ್ ವರದಿಯಿಂದ ಅವರು ಜನಜನಿತರಾಗಿದ್ದರು. ಡಾ.ಕೆ.ಕಸ್ತೂರಿರಂಗನ್ ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್ಕರ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ಅವರು,

ಡಾ. ಕೆ. ಕಸ್ತೂರಿರಂಗನ್ ಅವರ ದೂರದೃಷ್ಟಿಯ ನಾಯಕತ್ವ ಮತ್ತು ರಾಷ್ಟ್ರಕ್ಕೆ ನಿಸ್ವಾರ್ಥ ಕೊಡುಗೆಯನ್ನು ಯಾವಾಗಲೂ ಸ್ಮರಣೀಯ ಎಂದು ಹೇಳಿದ್ದಾರೆ.

<><*<><>*><>

ಚಿಕಿತ್ಸೆ ಮತ್ತು ವೈದ್ಯಕೀಯ ಪ್ರವಾಸೋದ್ಯಮಕ್ಕೆ ಭಾರತವು ಈಗ ಅತ್ಯಂತ ಬೇಡಿಕೆಯ ತಾಣಗಳಲ್ಲಿ ಒಂದಾಗಿದೆ ಎಂದು ಆಯುಷ್ ಖಾತೆ ರಾಜ್ಯ ಸಚಿವ ಪ್ರತಾಪ್‌ರಾವ್ ಜಾಧವ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ವೈದ್ಯಕೀಯ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಅವರು, ಭಾರತವು ಪರಂಪರೆ, ಆಧ್ಯಾತ್ಮಿಕತೆಯಲ್ಲಿ ಮಾತ್ರವಲ್ಲದೆ, ವೈದ್ಯಕೀಯ ಪ್ರವಾಸೋದ್ಯಮದಲ್ಲೂ ಮುಂಚೂಣಿಯಲ್ಲಿರುವ ಗುರಿಯನ್ನು ಹೊಂದಿದೆ ಎಂದು ತಿಳಿಸಿದರು. ಕೈಗೆಟುಕುವ ಮತ್ತು ವಿಶ್ವಾಸಾರ್ಹ ಚಿಕಿತ್ಸೆಯ ಕೇಂದ್ರವಾಗಿ ಹೊರಹೊಮ್ಮುವ ಹಂತದಲ್ಲಿ ಭಾರತವಿದೆ. ಇದು ದೇಶದ ಅತ್ಯುತ್ತಮ ವೈದ್ಯಕೀಯ ಶಕ್ತಿ ಹಾಗೂ ಜಾಗತಿಕ ಸಂಪರ್ಕ ಮತ್ತು ಸಹಕಾರವನ್ನು ಪ್ರದರ್ಶಿಸುತ್ತದೆ ಎಂದು ಸಚಿವ ಪ್ರತಾಪ್‌ರಾವ್ ಜಾಧವ್ ಹೇಳಿದರು.

<><*<><>*><>

ನದಿ ನಗರಗಳ ಒಕ್ಕೂಟದ ಅಡಿಯಲ್ಲಿ ವರ್ಷವಿಡೀ ಕೈಗೊಳ್ಳಬೇಕಾದ ಉಪಕ್ರಮಗಳ ಮಾರ್ಗಸೂಚಿಯನ್ನು ರೂಪಿಸಲು ರಾಷ್ಟ್ರೀಯ ಸ್ವಚ್ಛ ಗಂಗಾ ಮಿಷನ್, ವಾರ್ಷಿಕ ಮಾಸ್ಟರ್ ಪ್ಲಾನ್ ಅನ್ನು ಅನುಮೋದಿಸಿದೆ. ಜಲ ಶಕ್ತಿ ಸಚಿವಾಲಯದ ಪ್ರಕಾರ, ಈ ಯೋಜನೆಯು ಭಾರತದ ಬೆಳೆಯುತ್ತಿರುವ ನಗರಗಳಲ್ಲಿ ನದಿ-ಸೂಕ್ಷ್ಮ ನಗರ ಯೋಜನೆಯನ್ನು ಸಂಯೋಜಿಸುವತ್ತ ಗಮನಹರಿಸುತ್ತದೆ. ಇದು ಸಾಮರ್ಥ್ಯ-ವರ್ಧನೆ ಕಾರ್ಯಕ್ರಮಗಳು, ಜ್ಞಾನ ವಿನಿಮಯ ವೇದಿಕೆಗಳು, ತಾಂತ್ರಿಕ ಪರಿಕರಗಳ ಅಭಿವೃದ್ಧಿ, ತಜ್ಞರ ಮಾರ್ಗದರ್ಶನ ಮತ್ತು ವಿಷಯಾಧಾರಿತ ಪ್ರಕರಣ ಅಧ್ಯಯನಗಳ ಸರಣಿಯನ್ನು ಒಳಗೊಂಡಿದೆ.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಡಿದ್ದು ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೨೧ನೇ ಆವೃತ್ತಿಯಾಗಿದೆ. ಈ ಬಾರಿಯ ಮನ್ ಕಿ ಬಾತ್‌ಗೆ ಸಾರ್ವಜನಿಕರಿಂದ ಅನಿಸಿಕೆ, ಅಭಿಪ್ರಾಯಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು ಟೋಲ್-ಫ್ರೀ ಸಂಖ್ಯೆ ೧೮೦೦-೧೧-೭೮೦೦

ಅಥವಾ ಒಥಿಉov.iಟಿ  ಮೂಲಕ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲು ಇಂದು ಕೊನೆಯ ದಿನವಾಗಿದೆ.  ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಮೂಡಿಬರಲಿದೆ.

**<><*<><>*><>**

ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ  ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಿವೆ.  ಟಾಸ್ ಗೆದ್ದ ಸನ್‌ರೈಸರ್ಸ್ ಹೈದರಾಬಾದ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಅಂಕ ಪಟ್ಟಿಯಲ್ಲಿ ಕೊನೆಯ ಸ್ಥಾನದಲ್ಲಿ ಇರುವ ಉಭಯ ತಂಡಗಳಿಗೆ ಇಂದಿನ ಪಂದ್ಯ ಮಾಡು ಇಲ್ಲವೇ ಮಡಿ ಎಂಬಂತಾಗಿದೆ.

**<><*<><>*><>**

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೫೮೯ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೯ ಸಾವಿರದ ೨೧೩ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೨೦೭ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ  ೨೪ ಸಾವಿರದ ೩೯ ಅಂಕಗಳು ದಾಖಲಾಗಿದೆ.  ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೫ ರೂಪಾಯಿ ೪೪ ಪೈಸೆಯಷ್ಟಾಗಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ  <>*><>**